ಬೈಲಹೊಂಗಲ ನಗರದಲ್ಲಿರುವ ಸಂಗೊಳ್ಳಿ ರಾಯಣ್ಣನ ಮೂರ್ತಿಯ ಸುತ್ತಲೂ ಅಭಿವೃದ್ಧಿ.

2891:(3880)

ಶ್ರೀ ಮಹಾಂತೇಶ ಎಸ್.ಕೌಜಲಗಿ (ಬೈಲಹೊಂಗಲ) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಂಗೊಳ್ಳಿ ರಾಯಣ್ಣನ ಮೂರ್ತಿಯ ಸುತ್ತಲು ಅಭಿವೃದ್ಧಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದ್ದಿತು?

ಆ) ಈ ಹಣದಲ್ಲಿ ಯಾವ ಯಾವ ಕಾಮಗಾರಿಗಳನ್ನು ತೆಗೆದುಕೊಳ್ಳಬೇಕೆಂದು ನಿರ್ಧರಿಸಲಾಗಿದೆ?

ಇ) ಬೈಲಹೊಂಗಲ ನಗರದಲ್ಲಿರುವ ಸಂಗೊಳ್ಳಿ ರಾಯಣ್ಣನ ಮೂರ್ತಿಯ ಸುತ್ತಲೂ ಹೊನಲು ಬೆಳಕು ಯೋಜನೆ ಹಾಗೂ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀಮತಿ.ಲೀಲಾದೇವಿ ಆರ್.ಪ್ರಸಾದ್ (ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು):

ಅ) ರೂ.5.00 ಲಕ್ಷಗಳು

ಆ) ಜಿಲ್ಲಾ ಮಟ್ಟದ ಸಮಿತಿಯ ತೀರ್ಮಾನದಂತೆ ಈ ಕೆಳಕಂಡ ಕಾಮಗಾರಿಗಳನ್ನು ತೆಗೆದುಕೊಳ್ಳಲು ತೀರ್ಮಾನಿಸಲಾಗಿದೆ.

1. ಸಂಗೋಳ್ಳಿರಾಯಣ್ಣನ ಪ್ರತಿಮೆ ಸ್ಥಾಪನೆ.

2. ಹಾಗೂ ಸುತ್ತ ಮುತ್ತಲು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದು?

ಇ) ಇತ್ತೀಚೆಗೆ ಜಿಲ್ಲಾಮಟ್ಟದ ಸಮಿತಿಯನ್ನು ರಚಿಸಿದ್ದು ಸಮಿತಿಯ ಶಿಫಾರಸ್ಸಿನಂತೆ ಅಗತ್ಯವಿರುವ ಹಣವನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಮೈಸೂರು ನಗರದಲ್ಲಿ ಮಹಿಳಾ ವಿದ್ಯಾರ್ಥಿಗಳಿಗೆ ಸ್ವಯಂ ಉದ್ಯೋಗ

2892 (3938)

ಶ್ರೀ ಇ.ಮಾರುತಿರಾವ್ ಪವಾರ್ (ನರಸಿಂಹರಾಜ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದಲ್ಲಿ ಸ್ವಯಂ ಉದ್ಯೋಗ ಚಟುವಟಿಕೆ ಕೈಗೊಳ್ಳುವ ಸಲುವಾಗಿ ಮಹಿಳಾ ವಿದ್ಯಾರ್ಥಿಗಳಿಗೆ ಮಹಿಳಾ ಸರ್ಕಾರಿ ಐ.ಟಿ.ಐ. ಅವಶ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದರೆ, 1998-99ನೇ ಸಾಲಿನಲ್ಲಿ ಮಹಿಳಾ ಸರ್ಕಾರಿ ಐ.ಟಿ.ಐ ಪ್ರಾರಂಭಿಸುವ ಬಗ್ಗೆ ಸರ್ಕಾರದವರು ಕೈಕೊಂಡಿರುವ ಕ್ರಮವೇನು?

ಶ್ರೀ ಬಿ.ಸತ್ಯನಾರಾಯಣ (ಕಾರ್ಮಿಕ ರಾಜ್ಯ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಉದ್ಯೋಗ ವಿನಿಮಯ ಕಛೇರಿಯ ಹುದ್ದೆಗಳ ನೇಮಕಾತಿ

2893:(3939)

ಶ್ರೀ ಇ.ಮಾರುತಿರಾವ್ ಪವಾರ್ (ನರಸಿಂಹರಾಜ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿರುವ ಉದ್ಯೋಗ ವಿನಿಮಯ ಕಛೇರಿಗಳ ಸಂಖ್ಯೆ ಎಷ್ಟು; ಈ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು; ಇವುಗಳ ಕಾರ್ಯ ನಿರ್ವಹಣೆಗೆ ತಗಲುವ ವೆಚ್ಚವೆಷ್ಟು?

ಆ) ಎಲ್ಲಾ ಇಲಾಖೆಗಳ ಹುದ್ದೆಗಳ ನೇಮಕಾತಿಯನ್ನು ಉದ್ಯೋಗ ವಿನಿಮಯ ಕಚೇರಿಯ ಮೂಲಕವೇ ಮಾಡಲಾಗುತ್ತಿದೆಯೇ?

ಇ) ಕೇಂದ್ರ ಸರ್ಕಾರ ಇತ್ತೀಚೆಗೆ ನೇಮಕಾತಿ ಮಾಡುವಲ್ಲಿ ಹೊರಡಿಸಿರುವ ಆದೇಶವೇನು. ಈ ಆದೇಶ ಪ್ರಕಾರ ರಾಜ್ಯಗಳ ಯಾವುದೇ ಇಲಾಖೆಯಲ್ಲಿ ಯಾವುದೇ ಹುದ್ದೆಗೆ ನೇಮಕಾತಿ ಮಾಡಬೇಕಾದಲ್ಲಿ ಉದ್ಯೋಗ ವಿನಿಮಯ ಜೇಷ್ಠತಾ ಪಟ್ಟಿ ಜೊತೆಗೆ ಬಹಿರಂಗವಾಗಿ ವೃತ್ತ ಪತ್ರಿಕೆಸುದ್ದಿ ಮಾಧ್ಯಮ ಪ್ರಕಟಣಾ ಫಲಕಗಳಲ್ಲಿ ಪ್ರಕಟಿಸುವುದೆಂಬುದು ನಿಜವೇ?